ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಗ್ರಾಮೀಣ ಪ್ರದೇಶಗಳಲ್ಲಿರುವ ಗ್ರಂಥಾಲಯಗಳ ಬಗ್ಗೆ

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

566(660) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು;

(ಆ) ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳು ದಿನನಿತ್ಯ ತೆರೆಯುತ್ತಿವೆಯೇ; ಕೆಲವು ಗ್ರಂಥಪಾಲಕರು ತಿಂಗಳುಗಟ್ಟಲೇ ಗ್ರಂಥಾಲಯಗಳನ್ನು ತೆರೆಯದೇ ಕೇವಲ ಸಂಬಳವನ್ನು ಮಾತ್ರ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಯ ಗ್ರಂಥಾಲಯಗಳು ಕಾರ್ಯ ನಿರ್ವಹಿಸುತ್ತಿವೆ; ಈ ಗ್ರಂಥಾಲಯಗಳು ಕಾರ್ಯ ನಿರ್ವಹಿಸುವ ವೇಳೆ ಹಾಗೂ ಈ ಗ್ರಂಥಾಲಯಗಳಲ್ಲಿ ದಿನನಿತ್ಯ ಬರುವ ದಿನಪತ್ರಿಕೆಗಳು ಹಾಗೂ ವಿವಿಧ ಮಾಸ ಪತ್ರಿಕೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?